**NOVEMBER 27,2024**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ಹೆತ್ತವರು ಹೆಣ್ಣುಮಕ್ಕಳನ್ನು ಶಾಲೆಗೆ ಸೇರಿಸಿ**, ಶಿಕ್ಷಣ ಕೊಡಿಸಬೇಕು, ಪ್ರತಿ ಹೆಣ್ಣು ಮಗುವು ಶಿಕ್ಷಣ ಪಡೆಯಬೇಕು' ಎಂಬುದು ತಮ್ಮ ಎಲ್ಲ ಕೃತಿಗಳ ಆಶಯವಾಗಿದೆ ಎಂದು ಕೇಂದ್ರ ಸಾಹಿತ್ಯ ಅಕಾದೆಮಿ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ, ಬೊಳುವಾರು ಮಹಮ್ಮದ್ ಕುಂಞ ಹೇಳಿದರು. ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದ ವತಿಯಿಂದ, ನಾಡೋಜ ಡಾಕ್ಟರ್ ಪಾಟೀಲ ಪುಟ್ಟಪ್ಪ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಕರ್ನಾಟಕ ರಾಜ್ಯೋತ್ಸವ, ಕರ್ನಾಟಕ ನಾಮಕರಣ: 50 ರ ಸಂಭ್ರಮದ ಅಂಗವಾಗಿ ಜರುಗಿದ 'ಧರೆಗೆ ದೊಡ್ಡವರು' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಶಿಕ್ಷಣದಿಂದ ಮಹಿಳೆಯರು ಉತ್ತಮ ಬದುಕು ರೂಪಿಸಿಕೊಳ್ಳಬಹುದಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಬೊಳುವಾರು ಮಹಮ್ಮದ್ ಕುಂಞ ಹಾಗೂ ಧಾರವಾಡದ ಹಿರಿಯ ಗ್ರಂಥಾಲಯ ವಿಜ್ಞಾನಿ ಎಸ್.ಆರ್ ಗುಂಜಾಳ ಅವರನ್ನು ಸನ್ಮಾನಿಸಲಾಯಿತು. ಇಂದು ನಡೆಯುವ ಕಾರ್ಯಕ್ರಮದಲ್ಲಿ, ಶರಣ ಸಾಹಿತ್ಯ ಚಿಂತಕರು, 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವ ಹಿರಿಯ ಸಾಹಿತಿ ಡಾಕ್ಟರ್ ಗೊ.ರು ಚನ್ನಬಸಪ್ಪ ಅವರು ಭಾಗವಹಿಸಲಿದ್ದಾರೆ. ಇಂದು ಸಾಯಂಕಾಲ 4 ಗಂಟೆಗೆ ನಗರದ ರಂಗಾಯಣ ಆವರಣ, ಸುವರ್ಣ ಸಾಂಸ್ಕೃತಿಕ ಸಮುಚ್ಚಯದಲ್ಲಿ ಆಯೋಜಿಸಲಾಗಿರುವ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಧಾರವಾಡ ಜಿಲ್ಲಾ ಹಾಗೂ ತಾಲೂಕು ಘಟಕಗಳ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ, ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷರಾಗಿರುವ ಗೊ. ರು ಚನ್ನಬಸಪ್ಪ ಅವರನ್ನು ಸನ್ಮಾನಿಸಲಾಗುತ್ತಿದೆ.

<><><>

**ಬಾಗಲಕೋಟೆ ಜಿಲ್ಲಾ ಪಂಚಾಯತ್**, ಕರ ಸಂಗ್ರಹದಲ್ಲಿ ರಾಜ್ಯಕ್ಕೆ ಮೂರನೇ ಸ್ಥಾನ ಪಡೆದಿದೆ. ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಕರ ಸಂಗ್ರಹ ಜಾಗೃತಿ ಅಭಿಯಾನ ಆಯೋಜಿಸುವ ಮೂಲಕ ಒಂದೇ ದಿನದಲ್ಲಿ 3 ಕೋಟಿ 7 ಲಕ್ಷ ರೂಪಾಯಿ ಸಂಗ್ರಹವಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ತಿಳಿಸಿದ್ದಾರೆ. ಈ ತಿಂಗಳ 25 ನೇ ತಾರೀಖಿನಂದು ತೆರಿಗೆ ಸಂಗ್ರಹ ಅಭಿಯಾನ ಆಯೋಜಿಸಲಾಗಿತ್ತು.

<><><>

**ಕೃಷಿ ಮೇಳಗಳು** ರೈತರಿಗೆ ನೂತನ ತಂತ್ರಜ್ಞಾನ ಹಾಗೂ ಹೊಸ ತಳಿಗಳ ಪ್ರದರ್ಶನ ಮಾತ್ರವಲ್ಲದೆ, ಅವುಗಳ ಬಗ್ಗೆ ಮಾಹಿತಿ ಹಾಗೂ ಅಳವಡಿಕೆ ನಿಟ್ಟಿನಲ್ಲಿ ಸೂಕ್ತ ಮಾರ್ಗದರ್ಶನ ನೀಡಲು ಸಹಕಾರಿಯಾಗುತ್ತವೆ ಎಂದು ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾಕ್ಟರ್ ಎಸ್.ವಿ ಸುರೇಶ್ ಹೇಳಿದರು. ಮಂಡ್ಯ ತಾಲೂಕಿನ ವಿ.ಸಿ ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದಲ್ಲಿ ಆಯೋಜಿಸಲಾದ ಕೃಷಿ ಮೇಳಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ವಿಶ್ವವಿದ್ಯಾಲಯದ ಮೂಲಕ ನಡೆಯುತ್ತಿರುವ ಕೃಷಿ ಸಂಶೋಧನೆಗಳು ಹಾಗೂ ಕೃಷಿ ಪೂರಕ ಚಟುವಟಿಕೆಗಳು, ರೈತರಲ್ಲಿ ತಂತ್ರಜ್ಞಾನದ ಬಳಕೆ ಹಾಗೂ ಆಧುನಿಕ ಕೃಷಿಗೆ ಪ್ರೋತ್ಸಾಹ ನೀಡುತ್ತವೆ ಎಂದರು. (49)

<><><>

**ಬೀದರ ಜಿಲ್ಲೆಯ ಗ್ರಾಮೀಣ ಪ್ರದೇಶದ** ಸ್ವ ಸಹಾಯ ಗುಂಪಿನ ಮಹಿಳೆಯರಿಗೆ ಶೂನ್ಯ ಬಡ್ಡಿದರ ಅನ್ವಯವಾಗುವಂತೆ ಸಾಲ ಸೌಲಭ್ಯ ವಿತರಣೆ ಮಾಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ನಿರ್ದೇಶನ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸಹಕಾರಿ ಬ್ಯಾಂಕುಗಳ ಸಹಾಯಕ ಅಧಿಕಾರಿಗಳು ಹಾಗೂ ಸಂಜೀವಿನಿ ತಾಲೂಕು ವ್ಯವಸ್ಥಾಪಕರ ಸಭೆಯು ನಗರದ ಡಿ.ಸಿ.ಸಿ ಬ್ಯಾಂಕ್ ಸಭಾಂಗಣದಲ್ಲಿ ಜರುಗಿತು. ವರ್ಷದ ಅಂತ್ಯಕ್ಕೆ 3 ರಿಂದ 4 ಸಾವಿರ ಸ್ವ ಸಹಾಯ ಗುಂಪುಗಳಿಗೆ ಬ್ಯಾಂಕ್ ಲಿಂಕೇಜ್ ಮಾಡುವ ಗುರಿಯನ್ನು ನಿಗದಿಪಡಿಸಲಾಯಿತು. (30)

<><><>

**ಮಂಗನ ಕಾಯಿಲೆ ಸಂಪೂರ್ಣ ನಿರ್ಮೂಲನೆ ಮಾಡುವ** ಉದ್ದೇಶದಿಂದ ಲಸಿಕೆ ಕಂಡುಹಿಡಿಯಲು ಹೈದರಾಬಾದ್ ಮೂಲದ ಔಷಧ ಕಂಪೆನಿ ಜೊತೆ ಮಾತುಕತೆ ನಡೆಸಲಾಗಿದ್ದು, 2026 ರ ವೇಳೆಗೆ ಲಸಿಕೆ ದೊರೆಯಲಿದೆ ಇದೆ ಎಂದು ಆರೋಗ್ಯ ಖಾತೆ ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ಶಿವಮೊಗ್ಗ ಜಿಲ್ಲೆ, ಸಾಗರ ತಾಲೂಕಿನ ಅರಳಗೋಡು ಗ್ರಾಮದಲ್ಲಿ ಮಂಗನ ಕಾಯಿಲೆ ಕಂಡು ಬಂದ ಹಿನ್ನೆಲೆಯಲ್ಲಿ ಸಾರ್ವಜನಿಕರು ಹಾಗೂ ಅಧಿಕಾರಿಗಳ ಜೊತೆ ಸಭೆ ನಡೆಸಿದ ಅವರು, ಕಳೆದ ಐದು ವರ್ಷದಲ್ಲಿ ಮಂಗನ ಕಾಯಿಲೆಗೆ 25 ಜನ ತುತ್ತಾಗಿದ್ದಾರೆ. ಮಂಗನ ಕಾಯಿಲೆ ತಡೆಗಟ್ಟಲು ಜಿಲ್ಲಾಡಳಿತ ಹಾಗೂ ಆರೋಗ್ಯ ಇಲಾಖೆ ಸೂಕ್ತ ಮಾರ್ಗಸೂಚಿಗಳನ್ನು ನೀಡಿದ್ದು, ಕಾಯಿಲೆ ಹತೋಟಿ ನಿಟ್ಟಿನಲ್ಲಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು. (51)

<><><>

**ಬೌದ್ಧರ ಹಕ್ಕಿಗಾಗಿ ಹಾಗೂ ಬಿ.ಟಿ ಕಾಯಿದೆ 1949** ರದ್ದುಗೊಳಿಸಿ, ಬಿಹಾರದ ಮಹಾಬೋಧಿ ಮಹಾವಿಹಾರದ ಆಡಳಿತವನ್ನು ಸಂಪೂರ್ಣ ಬೌದ್ಧರಿಗೆ ನೀಡಬೇಕು ಎಂಬ ಬೇಡಿಕೆಯೊಂದಿಗೆ, ಸಂವಿಧಾನ ದಿನದಂದು ಬೀದರ್ ನಲ್ಲಿ ಆಲ್ ಇಂಡಿಯಾ ಬುದ್ಧಿಷ್ಟ್ ಫೋರಂ ವತಿಯಿಂದ ಶಾಂತಿಯುತ ಮೆರವಣಿಗೆ ನಡೆಯಿತು. ಬೀದರ ಬೌದ್ಧ ವಿಹಾರದ ಸಂಸ್ಥಾಪಕ ಭಂತೆ ಧಮ್ಮಾನಂದ ಮಹಾಥೇರೊ ನೇತೃತ್ವ ವಹಿಸಿದ್ದರು. ಜನವಾಡ ರಸ್ತೆಯ ಅಂಬೇಡ್ಕರ್ ಭವನದಿಂದ ಆರಂಭಗೊಂಡ ಭೌದ್ಧ ಸಂಘಟನೆಗಳ ಮೆರವಣಿಗೆ ಜಿಲ್ಲಾಧಿಕಾರಿ ಕಚೇರಿ ತಲುಪಿ, ಜಿಲ್ಲಾಧಿಕಾರಿ ಅವರಿಗೆ ಮನವಿ ಸಲ್ಲಿಸಿತು. (31)

<><><>

**ಉತ್ತರಕನ್ನಡ ಜಿಲ್ಲೆ** ದಾಂಡೇಲಿಯ ಸರಕಾರಿ ಮರಮುಟ್ಟುಗಳ ಕೋಠಿಯಲ್ಲಿ ಇಂದಿನಿಂದ ಇದೇ 29 ರವರೆಗೆ ವಿವಿಧ ನಾಟಾಗಳ ಇ–ಹರಾಜು ಪ್ರಕ್ರಿಯೆ ನಡೆಯಲಿದ್ದು, ಸಾರ್ವಜನಿಕರು ಇ–ಪೋರ್ಟಲ್‌ನಲ್ಲಿ ಹೆಸರು ನೊಂದಾಯಿಸಿಕೊಂಡು ವಿವಿಧ ಜಾತಿಯ ನಾಟಾಗಳನ್ನು ಖರೀದಿಸಬಹುದಾಗಿದೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..**

<><><>